## ಮೈಸೂರು ಡಿಸ್ಟ್ರಿಕ್ಟ್.

### ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರೀಯವರ ಕೋರ್ಟ್‌ನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 5.

ಮೃತಪಟ್ಟ ಲಕ್ಷ್ಮಿದೇವಮ್ಮನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ನರಸಿಹ್ಮಭಟ್ಟರು ಮೃತಪಟ್ಟ ಸದರೀ ಲಕ್ಷ್ಮಿದೇವಮ್ಮನವರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಪುಂಜರಾಬಾದ್ ತಾಲ್ಲೂಕು ಯಳೂರು ಹೋಬಳಿ ಕೊಂತ್ಲಾಪುರದ ಸ್ಥಳದ ಸದರೀ ನರಸಿಹ್ಮಭಟ್ಟರು ಸದರೀ ವಾಸಸ್ಥಳಾಗಿ ಮೃತಪಟ್ಟ ಲಕ್ಷ್ಮಿದೇವಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ 400 ರೂಪಾಯಿಗಳ ಸೂಲವನ್ನು ವಸೂಲ್ ಮಾಡಿಕೊಳ್ಳುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನರಸಿಹ್ಮಭಟ್ಟರ ಅರ್ಜೀಯನ್ನು 1887ನೇ ಇಸವಿ ಫಿಬ್ರುವರೀ ತಿಂಗಳು ತಾರೀಖು 15ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಲಕ್ಷ್ಮಿದೇವಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್‌ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಜನವರೀ ತಿಂಗಳು 11ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

---

1887ನೇ ಇಸವಿ ಅರ್ಜೀ ನಂಬರ್ 9.

ಮೃತಪಟ್ಟ ಕೂರ್ಮ್ಯೆಯನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಹಾಲಪ್ಪನವರು, ಮೃತಪಟ್ಟ ಸದರೀ ಕೂರ್ಮ್ಯೆಯನವರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಹೊಸ ಅಗ್ರಹಾರದ ಸ್ಥಳದ ಸದರೀ ಹಾಲಪ್ಪನವರು ಸದರೀ ವಾಸಸ್ಥರಾಗಿ ಮೃತಪಟ್ಟ ಕೂರ್ಮ್ಯೆಯನವರ ಜಿಂದಗಿ ಬಗ್ಯಾಗಿ ಬರತಕ್ಕ 800 ರೂಪಾಯಿಗಳ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಹಾಲಪ್ಪನವರ ಅರ್ಜೀಯನ್ನು 1887ನೇ ಇಸವಿ ಫಿಬ್ರುವರೀ ತಿಂಗಳು ತಾರೀಖು 15ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕೂರ್ಮ್ಯೆಯನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಜನವರೀ ತಿಂಗಳು 13ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಎಸ್. ಹೇಮಾಜಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

---

### ಮೈಸೂರು ಸಬ್ ಜಡ್ಜ್‌ರೀಯವರ ಕೋರ್ಟ್‌ನಲ್ಲಿ.

ದಿವಾಳಿಯಾದ ಡಿಕ್ರಿ ದೇಣೇದಾರ ನಂಜನಗೂಡು ತಾಲ್ಲೂಕು ಯೇಚಿಗಹಳ್ಳಿಯಲ್ಲಿರುವ ಕಿವಾಚಾರದ ಅಜ್ಜೇಗೌಡನ ಮಗ ಪಟೇಲ ಲಿಂಗೇಗೌಡನ ವಿಷಯದಲ್ಲಿ—

ಸ್ಯ 1886ನೇ ಇಸವಿ ದಿವಾಳಿ ಕೇಸ್ ನಂಬರ್ 32.

ಹುಕ್ಕುಂ.

ಮೇಲ್ಕಂಡ ಲಿಂಗೇಗೌಡನೆಂಬವನು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜಿ ಅಂಶವು, ಈ ಕೋರ್ಟು ರೂಬರೂ ಅರ್ಜೀದಾರನಾದ ಲಿಂಗೇಗೌಡನ ಪರವಾಗಿ ಅಡ್ವೊಕೇಟ್ ಮೆ|| ರಾಘವಾಚಾರ್ರು ಹಾಜರು ದರ್ಯಾಫ್ತ್ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮ್ಮಗೆ ಈ ದರ್ಯಾಫ್ತ್‌ಗೆ ನೋಟೀಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರಂದರೆ—1ನೇ ಮಲ್ಲಯ್ಯ, 2ನೇ ನಾರಣಪ್ಪ, 3ನೇ